# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1267 |
| ಸದಸ್ಯರ ಹೆಸರು | : | ಶ್ರೀ ಬಿ.ಜಿ ಪಾಟೀಲ್ |
| ಉತ್ತರಿಸುವ ದಿನಾಂಕ | : | 17.03.2021. |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಿಂದ ಡಾ:ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಸವಲತ್ತುಗಳನ್ನು ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು? (ಸಂಪೂರ್ಣ ವಿವರ ನೀಡುವುದು) | ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಿಂದ ಸವಲತ್ತುಗಳನ್ನು ಪಡೆದ ಫಲಾನುಭವಿಗಳ ಜಿಲ್ಲಾವಾರು ಸಂಖ್ಯೆ ಕೆಳಕಂಡಂತಿದೆ.<br><br>ಜಿಲ್ಲೆಗಳು \| 2017-18 \| 2018-19 \| 2019-20 \| ಒಟ್ಟು<br>ಯಾದಗಿರಿ \| 2931 \| 441 \| 86 \| 3458<br>ಕಲಬುರಗಿ \| 7193 \| 1279 \| 680 \| 9152 |
| (ಆ) | ಡಾ:ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಜಾತಿಯ ಜನಾಂಗದವರಿಗೆ ನೀಡಲಾಗುತ್ತಿರುವ ಸವಲತ್ತುಗಳಾವುವು; (ವಿವರ ನೀಡುವುದು) | ಪರಿಶಿಷ್ಟ ಜಾತಿಯ ಜನಾಂಗದವರಿಗೆ ನೀಡಲಾಗುತ್ತಿರುವ ಸವಲತ್ತುಗಳ ವಿವರ ಹಾಗೂ ಎಲ್ಲಾ ಯೋಜನೆಗಳ ಮಾಹಿತಿಯನ್ನು **ಅನುಬಂಧದಲ್ಲಿ** ನೀಡಲಾಗಿದೆ. |
| (ಇ) | ನಿಗಮದ ಎಲ್ಲಾ ಯೋಜನೆಗಳ ಕುರಿತು ಮಾಹಿತಿಯನ್ನು ನೀಡುವುದು? | |

**ಸಂಖ್ಯೆ: ಸಕಇ 145 ಎಸ್‌ಡಿಸಿ 2021**

(ಬಿ.ಶ್ರೀರಾಮುಲು)
ಸಮಾಜ ಕಲ್ಯಾಣ ಸಚಿವರು.

# ಅನುಬಂಧ

## ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಜಾತಿಯ ಜನಾಂಗದವರಿಗೆ ನೀಡಲಾಗುತ್ತಿರುವ ಸವಲತ್ತುಗಳ ವಿವರಗಳು.

### ಸ್ವಯಂ ಉದ್ಯೋಗ / ನೇರಸಾಲ

ಸ್ವಯಂ ಉದ್ಯೋಗ ಯೋಜನೆಯಡಿ ಪರಿಶಿಷ್ಟ ಜಾತಿ ಯುವಕ ಯುವತಿಯರಿಗೆ ಸಣ್ಣ ಉದ್ದಿಮೆ ಪ್ರಾರಂಭಿಸಲು ಹಣ್ಣು ಮತ್ತು ತರಕಾರಿಗಳನ್ನು ತಳ್ಳುವಗಾಡಿಯ ಮೂಲಕ ಮಾರಾಟ ಮಾಡಲು, ಹೈನುಗಾರಿಕೆ ಹಾಗೂ ಇತರೆ ಉದ್ದೇಶಗಳಿಗೆ ಘಟಕ ವೆಚ್ಚ ರೂ.0.50ಲಕ್ಷಗಳಲ್ಲಿ ಸಾಲ ಸೌಲಭ್ಯ ಕಲ್ಪಿಸಲಾಗುವುದು. ಘಟಕ ವೆಚ್ಚದ ಪೈಕಿ ರೂ25000/- ಸಹಾಯಧನ ಹಾಗೂ ರೂ.25000/- ಸಾಲವಾಗಿರುತ್ತದೆ. ಇದನ್ನು ನಿಗಮದಿಂದ ನೀಡಲಾಗುವುದು. ಸಾಲದ ಮೊತ್ತಕ್ಕೆ ಶೇ.4ರಷ್ಟು ವಾರ್ಷಿಕ ಬಡ್ಡಿ ವಿಧಿಸಲಾಗುವುದು. ಮರುಪಾವತ ಅವಧಿ 36 ತಿಂಗಳು.

### ಉದ್ಯಮಶೀಲತಾ ಯೋಜನೆ (ಐ.ಎಸ್.ಬಿ) (ಬ್ಯಾಂಕುಗಳ ಸಹಯೋಗದಲ್ಲಿ)

ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆಯಡಿ ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿ ಹಾಪ್‌ಕಾಮ್ಸ್ ಮಾದರಿಯಲ್ಲಿ ಹಣ್ಣು ಮತ್ತು ತರಕಾರಿ ಮಾರಾಟ ಮಾಡಲು ಮಳಿಗೆಗಳನ್ನು ಸ್ಥಾಪಿಸಲು ಮತ್ತು ಇತರ ಉದ್ದೇಶಗಳಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಘಟಕ ವೆಚ್ಚ ರೂ.3.00ಲಕ್ಷ ಆಗಿದ್ದು, ಇದರಲ್ಲಿ ಶೇ.70ರಷ್ಟು ಅಥವಾ ಗರಿಷ್ಠ ಮಿತಿ ರೂ.1.00ಲಕ್ಷದವರೆಗೆ ಸಹಾಯಧನ ಉಳಿದ ಮೊತ್ತ ಬ್ಯಾಂಕ್ ಸಾಲವಾಗಿರುತ್ತದೆ.

### ಭೂ ಒಡೆತನ ಯೋಜನೆ

ರಾಜ್ಯದಲ್ಲಿ ಪರಿಶಿಷ್ಟ ಜಾತಿಗೆ ಸೇರಿದ ಭೂರಹಿತ ಕೃಷಿ ಕಾರ್ಮಿಕರ ಕುಟುಂಬದ ಮಹಿಳೆಯರಿಗೆ ಮಾತ್ರ ಈ ಯೋಜನೆಯಡಿ ಸೌಲಭ್ಯವನ್ನು ನೀಡಲಾಗುತ್ತದೆ. ಸರ್ಕಾರದ ಆದೇಶ ಸಂಖ್ಯೆ:ಸಕಇ 148ಎಸ್‌ಡಿಸಿ2017, ಬೆಂಗಳೂರು, ದಿನಾಂಕ:20.04.2017 ರಂತೆ ಘಟಕ ವೆಚ್ಚ ಗರಿಷ್ಟ ರೂ.15.00ಲಕ್ಷ ಇದ್ದು, ಇದರಲ್ಲಿ ಶೇ.50 ಭಾಗ ಸಹಾಯಧನ ಹಾಗೂ ಶೇ.50 ಭಾಗ ಸಾಲದ ರೂಪದಲ್ಲಿ ಆರ್ಥಿಕ ನೆರವನ್ನು ನೀಡಲಾಗುವುದು. ರೂ.15.00ಲಕ್ಷ ಘಟಕ ವೆಚ್ಚದ ಮಿತಿಯಲ್ಲಿ ಕನಿಷ್ಠ 2 ಎಕರೆ ಖುಷ್ಕಿ ಅಥವಾ ಕನಿಷ್ಠ 1 ಎಕರೆ ತರಿ/ಭಾಗಾಯ್ತು ಜಮೀನುಗಳನ್ನು ಅಥವಾ ಬಾಗಾಯ್ತು ಅರ್ಧ ಎಕರೆಗೆ(20 ಗುಂಟೆ) ಕಡಿಮೆಯಲ್ಲದಂತೆ ಒದಗಿಸಲಾಗುವುದು. ಫಲಾನುಭವಿಯು ಸಾಲದ ಹಣವನ್ನು 10 ವಾರ್ಷಿಕ ಕಂತುಗಳಲ್ಲಿ ಮರುಪಾವತಿ ಮಾಡಬೇಕು. ಇದಕ್ಕೆ ಬಡ್ಡಿದರ ಶೇ.6 ವಿಧಿಸಲಾಗುತ್ತದೆ. ಜಮೀನನ್ನು ಮಾರಾಟ ಮಾಡುವವರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಜನಾಂಗಕ್ಕೆ ಸೇರಿದವರಾಗಿರಬಾರದು. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿರುವ ಸಮಿತಿಯು ದರ ನಿಗದಿಪಡಿಸುತ್ತದೆ.

ಭೂ ಒಡೆತನ ಯೋಜನೆಯಡಿ ಅವಧಿಸಾಲವನ್ನು ನಿಗಮದ ಷೇರು ಬಂಡವಾಳದಿಂದ ಮತ್ತು ಸಹಾಯಧನವನ್ನು ರಾಜ್ಯ ಸರ್ಕಾರವು ನಿಗಧಿಪಡಿಸಿದ ಅನುದಾನ ದಿಂದ ಭರಿಸಲಾಗುತ್ತಿದೆ. ಈ ಯೋಜನೆಯಡಿ ಫಲಾಪೇಕ್ಷಿಗಳಿಗೆ ಸೌಲಭ್ಯ ಕಲ್ಪಿಸಲು ವಿಧಾನಸಭಾ ಕ್ಷೇತ್ರವಾರು ಪರಿಶಿಷ್ಟ ಜಾತಿಯ ಜನಸಂಖ್ಯೆ ಆಧಾರದ ಮೇಲೆ ಮತ್ತು ಹಿಂದಿನ ವರ್ಷಗಳಲ್ಲಿ ಹೆಚ್ಚಿನ ಪ್ರಸ್ತಾವನೆಗಳು ಬಂದಿರುವ ಜಿಲ್ಲೆಗಳನ್ನು ಗಮನದಲ್ಲಿಟ್ಟುಕೊಂಡು ಜಿಲ್ಲಾವಾರು ಗುರಿಯನ್ನು ನಿಗದಿಪಡಿಸಲಾಗಿದೆ.

2018-19ನೇ ಸಾಲಿನಿಂದ ಬೆಂಗಳೂರು ನಗರ, ಗ್ರಾಮಾಂತರ, ರಾಮನಗರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಸೀಮಿತಗೊಂಡಂತೆ ಈ ಯೋಜನೆಯಡಿ ಘಟಕ ವೆಚ್ಚವನ್ನು ರೂ.15.00ಲಕ್ಷಗಳಿಂದ ರೂ.20.00ಲಕ್ಷಗಳಿಗೆ ಹೆಚ್ಚಿಸಲಾಗಿದೆ.

ಉಳಿದ ಜಿಲ್ಲೆಗಳಲ್ಲಿ ಘಟಕ ವೆಚ್ಚ ರೂ.15.00ಲಕ್ಷಗಳಿದ್ದು, ಇದರಲ್ಲಿ ಸಹಾಯಧನ ಮತ್ತು ಅವಧಿಸಾಲ 50:50ರ ಅನುಪಾದಲ್ಲಿರುತ್ತದೆ. ಅವಧಿ ಸಾಲಕ್ಕೆ ವಾರ್ಷಿಕ ಶೇ.6ರ ದರದಲ್ಲಿ ಬಡ್ಡಿ ವಿಧಿಸಲಾಗುವುದು. ಸಾಲ ಮತ್ತು ಬಡ್ಡಿಯನ್ನು 10 ವರ್ಷಗಳ ಅವಧಿಯಲ್ಲಿ ವಾರ್ಷಿಕ ಕಂತುಗಳಲ್ಲಿ ಮರುಪಾವತಿ ಮಾಡಬೇಕಾಗಿರುತ್ತದೆ.

...2

## ಗಂಗಾ ಕಲ್ಯಾಣ ಯೋಜನೆ-ವೈಯಕ್ತಿಕ ನೀರಾವರಿ ಕೊಳವೆಬಾವಿ

ಗಂಗಾ ಕಲ್ಯಾಣ ವೈಯಕ್ತಿಕ ನೀರಾವರಿ ಕೊಳವೆಬಾವಿ ಯೋಜನೆಯನ್ನು 1984ರಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ 1೪ ಎಕರೆಯಿಂದ 5.00 ಎಕರೆ ಜಮೀನು ಹೊಂದಿರುವ ಪರಿಶಿಷ್ಟ ಜಾತಿಯ ಸಣ್ಣ ಮತ್ತು ಅತೀ ಸಣ್ಣ ರೈತರ ಜಮೀನಿನಲ್ಲಿ ಕೊಳವೆಬಾವಿ ಕೊರೆಸಿ, ಪಂಪ್‌ಸೆಟ್ ಅಳವಡಿಸಿ ವಿದ್ಯುದ್ಧೀಕರಣಗೊಳಿಸಿ ನೀರಾವರಿ ಸೌಲಭ್ಯ ಕಲ್ಪಿಸಲಾಗುತ್ತಿದೆ. ಮಲೆನಾಡು ಪ್ರದೇಶಗಳಾದ ಕೊಡಗು, ದಕ್ಷಿಣ ಕನ್ನಡ, ಉಡುಪಿ, ಕಾರವಾರ, ಚಿಕ್ಕಮಗಳೂರು, ಶಿವಮೊಗ್ಗ ಮತ್ತು ಹಾಸನ ಜಿಲ್ಲೆಗಳಲ್ಲಿ 1.00 ಎಕರೆ ಜಮೀನು ಹೊಂದಿರುವವರಿಗೂ ಸಹ ನೀರಾವರಿ ಸೌಲಭ್ಯ ಒದಗಿಸಲಾಗುತ್ತಿದೆ.

ಈ ಯೋಜನೆಯಡಿ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು(ಗ್ರಾ), ಬೆಂಗಳೂರು(ನಗರ), ತುಮಕೂರು ಮತ್ತು ರಾಮನಗರ ಜಿಲ್ಲೆಗಳಲ್ಲಿ ಅಂತರ್ಜಲ ಮಟ್ಟ ಕೆಳಗೆ ಕುಸಿದಿರುವುದರಿಂದ ಈ ಜಿಲ್ಲೆಗಳಲ್ಲಿ ಘಟಕ ವೆಚ್ಚ ರೂ 4.50 ಲಕ್ಷಕ್ಕೆ ಹೆಚ್ಚಿಸಲಾಗಿದ್ದು, ಇದರಲ್ಲಿ ರೂ. 4.00 ಲಕ್ಷ ಸಹಾಯಧನವಿದ್ದು, ಉಳಿದ ರೂ. 50,000/- ಅವಧಿಸಾಲವಾಗಿರುತ್ತದೆ. ಇತರೆ ಜಿಲ್ಲೆಗಳಲ್ಲಿ ಘಟಕ ವೆಚ್ಚ ರೂ. 3.50 ಲಕ್ಷ ನಿಗದಿಪಡಿಸಿದ್ದು, ಇದರಲ್ಲಿ ರೂ.3.00ಲಕ್ಷ ಸಹಾಯದನ ಮತ್ತು ರೂ.0.50 ಲಕ್ಷ ಅವಧಿಸಾಲವಾಗಿರುತ್ತದೆ.

ಘಟಕ ವೆಚ್ಚದ ಪೈಕಿ ವಿದ್ಯುದ್ಧೀಕರಣಕ್ಕೆ ಘಟಕ ವೆಚ್ಚದ ಸಹಾಯಧನದ ಮಿತಿಯಲ್ಲಿ ಪ್ರತಿ ಕೊಳವೆಬಾವಿಗೆ ರೂ. 50,000/-ಗಳನ್ನು ಸಂಬಂಧಿಸಿದ ಎಸ್ಕಾಂಗಳಿಗೆ ಬಿಡುಗಡೆ ಮಾಡಲಾಗುವುದು.

## ಮೈಕ್ರೊ ಕ್ರೆಡಿಟ್ (ಪ್ರೇರಣಾ)

ಡಾ:ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಮಹಿಳೆಯರ ಆರ್ಥಿಕ ಸ್ವಾವಲಂಬನೆ ಮತ್ತು ಸಬಲೀಕರಣ ಉದ್ದೇಶಕ್ಕಾಗಿ **"ಪ್ರೇರಣಾ ಯೋಜನೆ"** ಗಳನ್ನು ಅನುಷ್ಠಾನಗೊಳಸಲು ಉದ್ದೇಶಿಸಿದೆ. ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿನ ಪರಿಶಿಷ್ಟ ಜಾತಿ ನಿರುದ್ಯೋಗಿ ಮಹಿಳೆಯರಿಗೆ ಗುಂಪು ಚಟುವಟಿಕೆಗಳ ಮೂಲಕ ಉತ್ಪಾದನಾ ಚಟುವಟಿಕೆಗಳನ್ನು ಆರಂಭಿಸಿ ಲಾಭಗಳಿಸಲು ಸ್ವಯಂ ಉದ್ಯೋಗ ಘಟಕಗಳನ್ನು ಆರಂಭಿಸಲು ನಿಗಮದಿಂದ ಸಹಾಯದನ ಮತ್ತು ಸಾಲ ನೀಡಲು ಅವಕಾಶ ಮಾಡಿಕೊಡಲಾಗುತ್ತದೆ.

ಆಯ್ಕೆಯಾದ ಕನಿಷ್ಟ 10 ಮಹಿಳೆಯರ ಸ್ವಸಹಾಯ ಗುಂಪನ್ನು ರಚಿಸುವುದು/ಹಾಲಿ ಅಸ್ಥಿತ್ವದಲ್ಲಿರುವ ಮಹಿಳಾ ಸ್ವಸಹಾಯ ಗುಂಪಿಗೆ ಆರ್ಥಿಕ ಬೆಂಬಲವನ್ನು ನೀಡಲಾಗುವುದು. ಜಂಟಿ ಖಾತೆಯನ್ನು ಆರಂಭಿಸಿ ಉತ್ತಮ ಆದಾಯ ಗಳಿಸುವ, ಉತ್ಪಾದನಾ/ಸೇವಾಘಟಕ ಆರಂಭಿಸಲು ರೂ.2.50ಲಕ್ಷ ಘಟಕವೆಚ್ಚವನ್ನು ಮಂಜೂರು ಮಾಡಲಾಗುವುದು. ಪ್ರತಿ ಸದಸ್ಯರಿಗೆ ರೂ.25,000/-ದಂತೆ ಹಣವನ್ನು ನಿಗಮ ಭರಿಸುತ್ತದೆ. (ರೂ.15,000/- ಸಹಾಯಧನ ಮತ್ತು ರೂ.10,000/- ಬೀಜಧನ ಸಾಲ). ವ್ಯಾಪಾರ/ ಉತ್ಪಾದನೆ/ಸೇವಾ ಚಟುವಟಿಕೆಗಳಲ್ಲಿ ಗಳಿಸುವ ಆದಾಯವನ್ನು ಸಮಾನವಾಗಿ ಹಂಚಿಕೆ ಮಾಡಿಕೊಂಡು ಆರ್ಥಿಕ ಸ್ವಾವಲಂಬನೆಯನ್ನು ಹೊಂದುವುದು ಯೋಜನೆಯ ಮೂಲ ಉದ್ದೇಶವಾಗಿರುತ್ತದೆ.

## ಸಮೃದ್ಧಿ ಯೋಜನೆ

ಡಾ:ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮವು ಗ್ರಾಮೀಣ/ನಗರ ಪ್ರದೇಶಗಳಲ್ಲಿನ ಪರಿಶಿಷ್ಟ ಜಾತಿಯ ನಿರುದ್ಯೋಗಿ ಯುವಕ/ಯುವತಿಯರನ್ನು ಉದ್ಯಮ ಶೀಲರನ್ನಾಗಿಸಲು **"ಸಮೃದ್ಧಿ ಯೋಜನೆ"** ಅನುಷ್ಠಾನಗೊಳಿಸಲು ಉದ್ದೇಶಿಸಿದೆ. ಸದರಿ ಯೋಜನೆಯಡಿ ಪರಿಶಿಷ್ಟ ಜಾತಿಯ ನಿರುದ್ಯೋಗಿಗಳಿಗೆ ವಿವಿಧ ಸ್ವಯಂ ಉದ್ಯೋಗ ಘಟಕಗಳನ್ನು ಆರಂಭಿಸಲು ಹಾಗೂ ಲಾಭದಾಯಕವಾಗಿ ನಡೆಸಲು ಅಗತ್ಯವಾದ ಉದ್ಯಮಶೀಲತಾ ತರಬೇತಿ/ವೃತ್ತಿ ಕೌಶಲ್ಯ ತರಬೇತಿಯನ್ನು ನೀಡಿ ಮಾರುಕಟ್ಟೆ ವ್ಯವಸ್ಥೆಯೊಂದಿಗೆ ಘಟಕಗಳನ್ನು ಸೃಷ್ಟಿಸಲು ವ್ಯವಸ್ಥೆ ಮಾಡಲಾಗುವುದು. ಸದರಿ ಯೋಜನೆಯಡಿ ವಿವಿಧ ಉದ್ದೇಶಗಳಡಿ ಯೋಜನೆಗಳನ್ನು ರೂಪಿಸಲಾಗಿದೆ.

ಉತ್ತಮ ಮಾರುಕಟ್ಟೆ ಹೊಂದಿರುವ ಸರ್ಕಾರಿ ಮತ್ತು ಖಾಸಗಿ ಬ್ರಾಂಡೆಡ್ ಸಂಸ್ಥೆಗಳ ಸಹಯೋಗದಲ್ಲಿ ಫ್ರಾಂಚೈಸಿ/ಡೀಲರ್‌ಶಿಪ್ ವ್ಯವಸ್ಥೆಯೊಂದಿಗೆ ರಿಟೈಲ್ ವ್ಯಾಪಾರಿ ಮಳಿಗೆಗಳನ್ನು ಆರಂಭಿಸಲು ಅಗತ್ಯವಾದ ತಾಂತ್ರಿಕ ಬೆಂಬಲ ಹಾಗೂ ಆರ್ಥಿಕ ಬೆಂಬಲ ನೀಡಿ ಯಶಸ್ವಿ ಉದ್ದಿಮೆದಾರರನ್ನಾಗಿ ಮಾಡುವುದು ಈ ಯೋಜನೆಯ ಉದ್ದೇಶವಾಗಿರುತ್ತದೆ. ಈಗಾಗಲೇ ಸರ್ಕಾರಿ ಮತ್ತು ಬ್ರಾಂಡೆಡ್ ಸಂಸ್ಥೆಗಳ ಜೊತೆ ಸರ್ಕಾರವು ಒಡಂಬಡಿಕೆ (ಎಂಓಯು) ಮಾಡಿಕೊಳ್ಳಲು ವ್ಯವಸ್ಥೆಯಾಗಿರುತ್ತದೆ. ಆಯ್ಕೆಯಾದ ಪ್ರತಿ ಫಲಾನುಭವಿಗೆ ಗರಿಷ್ಟ ರೂ.10.00ಲಕ್ಷಗಳವರೆಗೆ ಆರ್ಥಿಕ ಬೆಂಬಲ ಒದಗಿಸಲಾಗುತ್ತದೆ.

..3

**<u>ಐರಾವತ ಯೋಜನೆ</u>**

ಡಾ:ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮವು ಲಘು ವಾಹನ ಚಾಲನಾ ಪರವಾನಗಿ ಹೊಂದಿರುವ ಪರಿಶಿಷ್ಟ ಜಾತಿಯ ನಿರುದ್ಯೋಗಿ ವಿದ್ಯಾವಂತ ಯುವಕ/ ಯುವತಿಯರಿಗೆ ಪ್ರವಾಸಿ ಟ್ಯಾಕ್ಸಿಗಳ ಮಾಲೀಕರನ್ನಾಗಿ ಮಾಡಿ "ಓಲಾ"/"ಉಬರ್/ಮೇರು" ಸಂಸ್ಥೆಗಳ ಸಹಯೋಗದಲ್ಲಿ ಅತಿ ಹೆಚ್ಚು ಆದಾಯ ಪಡೆಯುವ **"ಐರಾವತ ಯೋಜನೆ"** ಅನುಷ್ಠಾನಗೊಳಸಲು ಉದ್ದೇಶಿಸಿದೆ. ಕರ್ನಾಟಕ ರಾಜ್ಯ ಅಂತರಾಷ್ಟ್ರೀಯ ಮಟ್ಟದ ಪ್ರವಾಸಿಗರ ತಾಣವಾಗಿದ್ದು, ಈ ಯೋಜನೆಗೆ ಹೆಚ್ಚಿನ ಬೇಡಿಕೆ ಇರುತ್ತದೆ.

ಡಾ:ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಈ ಯೋಜನೆಗೆ ಗರಿಷ್ಟ ರೂ.5.00ಲಕ್ಷಗಳವರೆಗೆ ನಿಗಮದಿಂದ ಸಹಾಯಧನ ಒದಗಿಸಲಾಗುವುದು. ಉಳಿದ ಭಾಗ ಬ್ಯಾಂಕ್/ಹಣಕಾಸು ಸಂಸ್ಥೆ/ಫಲಾನುಭವಿಯ ವಂತಿಕೆಯಿಂದ ಭರಿಸಿ ಯೋಜನೆಯನ್ನು ಅನುಷ್ಟಾನ ಮಾಡಲಾಗುವುದು.

ಆಯ್ಕೆಯಾದ ಫಲಾನುಭವಿಗಳಿಗೆ "ಓಲಾ"/"ಉಬರ್/ಮೇರು" ಸಂಸ್ಥೆಗಳೊಂದಿಗೆ ಟೈ-ಅಪ್ ಮಾಡಿಕೊಂಡು ಬೇಡಿಕೆ ಇರುವ ಮುಖ್ಯ ನಗರ ಪ್ರದೇಶಗಳಾದ ರಾಜಧಾನಿ ಬೆಂಗಳೂರು, ಮೈಸೂರು, ಮಂಗಳೂರು, ಹುಬ್ಬಳ್ಳಿ, ಧಾರವಾಡ ಇನ್ನಿತರೇ ಜಿಲ್ಲಾ ಕೇಂದ್ರಗಳಲ್ಲಿ ವಾಹನ ಚಾಲನೆ ಮಾಡಲು ವ್ಯವಸ್ಥೆ ಮಾಡಿ, ಯೋಜನೆಯನ್ನು ರೂಪಿಸಲಾಗಿದೆ.

******